Form No.4 (Civil)
Deposition
Sheets
(R.P.No.57)

# ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ

## ಎಸ್.ಸಿ. ಸಂಖ್ಯೆ: 19/2022

ಪ್ರಾ.ಸಾ. 1 ಚಾ.ಸಾ 3

| | | |
|---|---|---|
| ಹೆಸರು | : | ಗಂಗಪ್ಪ |
| ತಂದೆಯ ಹೆಸರು | : | ಸಾಬಣ್ಣ |
| ವಯಸ್ಸು | : | 63 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸ | : | ಗಾಜರಕೋಟ |

ಪ್ರಮಾಣ ವಚನ ಭೋಧಿಸಿದ ದಿನಾಂಕ: 27-11-2025
ಮುಖ್ಯ ವಿಚಾರಣೆ ಸರಕಾರಿ ಅಭಿಯೋಜಕರಿಂದ

ನನಗೆ ಚಾಸಾ-2, 5, 6 ರವರ ಪರಿಚಯ ಇರುವುದಿಲ್ಲ. 1ನೇ ಆರೋಪಿಯ ಪರಿಚಯ ಇರುವುದಿಲ್ಲ. ನನ್ನನ್ನು ಹಾಗೂ ಚಾಸಾ-2 ರವರನ್ನು ಗುರುಮಠಕಲ್ ಪೊಲೀಸರು ಎರಡು ದಾಖಲೆಗೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಸಾಕ್ಷಿದಾರರಿಗೆ ಈಗ ಸ್ಥಳಪಂಚನಾಮೆ ಮತ್ತು ಕಚ್ಚಾನಕಾಶೆ ತೋರಿಸಲಾಗಿದ್ದು ಅವುಗಳನ್ನು ನೊಡಿ ಗುರುತಿಸಿದು್ದ, ಅವುಗಳನ್ನು **ನಿ.ಪಿ.1 ಮತ್ತು 2** ಎಂದು ಗುರುತಿಸಲಾಯಿತು. ಆ ಕಾಲಕ್ಕೆ ತೆಗೆದ ಭಾವಚಿತ್ರವನ್ನು **ನಿ.ಪಿ.3** ಎಂದು ಗುರುತಿಸಲಾಯಿತು. ಭಾವಚಿತ್ರವನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ.

2. ಇನ್ನೊಂದು ಜಪ್ತಿ ಪಂಚನಾಮೆ ನೋಡುತ್ತಿದ್ದು ಅದನ್ನು **ನಿ.ಪಿ.4** ಎಂದು ಗುರುತಿಸಲಾಯಿತು. ಆ ಕಾಲಕ್ಕೆ ತೆಗೆದ ಭಾವಚಿತ್ರವನ್ನು **ನಿ,ಪಿ.5** ಎಂದು ಗುರುತಿಸಲಾಯಿತು. ನಿ.ಪಿ.1 ಮತ್ತು 4 ರಲ್ಲಿ ಬರೆದ ವಿಷಯ ನನಗೆ ಗೊತ್ತಿರುವುದಿಲ್ಲ.

**(ಈ ಸಂದರ್ಭದಲ್ಲಿ ಮಾನ್ಯ ಪಿಪಿರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿರುತ್ತಾರೆ, ಅನುಮತಿ ನೀಡಲಾಗಿದೆ.)**

ಪಾಟೀ ಸವಾಲುಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ

3. ದಿಃ 23.12.2021 ರಂದು ಬೆಳಿಗ್ಗೆ 8.00-9.00 ಗಂಟೆಯವರೆಗೆ ನನ್ನನ್ನು ಹಾಗೂ ಚಾಸಾ-2 ರವರನ್ನು ನಮ್ಮ ಗ್ರಾಮದ ಅಂಬಿಗರ ಚೌಡಯ್ಯರವರ ಮೂರ್ತಿಯ ಮುಂದೆ ಚಾಸಾ-6 ರವರು ತೋರಿಸಿದ ಸ್ಥಳದಲ್ಲಿ ನಿ.ಪಿ.1 ರಂತೆ ಸ್ಥಳ ಪಂಚನಾಮೆ ಮಾಡಿ ನಿ.ಪಿ.2 ರಂತೆ ಕಚ್ಚಾ ನಕಾಶೆ ತಯಾರಿಸಿ, 3 ಕಲ್ಲುಗಳನ್ನು ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಕಾಲಕ್ಕೆ ನಿ.ಪಿ.3 ರಂತೆ ಭಾವಚಿತ್ರವನ್ನು ತೆಗೆದಿರುತಾ್ತರೆ ಎಂದರೆ ಸರಿಯಲ್ಲ. ಅದೇ ದಿನ ಮಧ್ಯಾಹ್ನ 1.00-2.00 ಗಂಟೆಯವರೆಗೆ 1 ನೇ ಆರೋಪಿ ನರಸಪ್ಪ ಈತನು ಅಪರಾಧಕ್ಕೆ ಸಂಬಂಧಿಸಿದ ತಲವಾರನ್ನು ತನ್ನ ಮನೆಯಲ್ಲಿ ಹಾಜರುಪಡಿಸಿದ ಮೇರೆಗೆ ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ನಿ.ಪಿ.4 ರಂತೆ ಜಪ್ತಿ ಪಂಚನಾಮೆ ಮಾಡಿ, ಆ ಕಾಲಕ್ಕೆ ನಿ.ಪಿ.5 ರಂತೆ ಭಾವಚಿತ್ರವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

4. ನನಗೆ ಎಲ್ಲಾ ವಿಷಯಗೊತ್ತಿದ್ದರು ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿತರ ಪರವಾಗಿ ಶ್ರೀ.ಎಸ್.ಎಸ್.ಪಿ. ವಕೀಲರಿಂದ

- ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.

ಮರುವಿಚಾರಣೆಃ-ಇಲ್ಲ

(ನನ್ನ ಉಕ್ತ ಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

ಓ.ಹೇ.ಕೆ.ಸ. ಇದೆ.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು, ಯಾದಗಿರಿ.